ಇದನ್ನು ಅಭಿವೃದ್ಧಿಪಡಿಸಬೇಕೆಂದು ೯೮.೩೦ ಲಕ್ಷ ರೂ. ಗಳ ಅಂದಾಜಿನಲ್ಲಿ ಕೇಂದ್ರ ರಸ್ತೆ ಫಂಡ್‌ನಲ್ಲಿ ತೆಗೆದುಕೊಳ್ಳಲಾಗಿದೆ. ಈ ಕಾಮಗಾರಿಗಳನ್ನು ವಿಪ್ರಿಲ್ ೮೯ರಂದು ತೆಗೆದುಕೊಳ್ಳಲಾಯಿತು. ಮೇ ೯೦ರವರೆಗೂ ೩೭.೫೪ ಲಕ್ಷ ರೂ ಗಳ ಪ್ರಗತಿಯಾಗಿದೆ. ಈ ಕಾಮಗಾರಿಯಲ್ಲಿ ರಸ್ತೆಗಳನ್ನು ಅಗಲ ಪಡಿಸುವ ಕಾರ್ಯದಲ್ಲಿ ಕೆಲವು ಮರಗಳನ್ನು ತೆಗೆಯಬೇಕಾಗುತ್ತದೆ ಇದು ದಟ್ಟ ಅರಣ್ಯದಲ್ಲಿರುವುದರಿಂದ ಅರಣ್ಯ ಇಲಾಖೆಯ ಅನುಮತಿ ಬೇಕಾಗುತ್ತದೆ. ಅರಣ್ಯ ಇಲಾಖೆಯವರು ಈ ಅನುಮತಿಗಾಗಿ ಕೇಂದ್ರ ಸರ್ಕಾರಕ್ಕೆ ಬರೆದಿದ್ದಾರೆ. ಈ ಕಾಮಗಾರಿಯನ್ನು ಜೂನ್ ೯೧ರ ವೇಳೆಗೆ ಮುಗಿಸುವ ಗುರಿ ಇದೆ. ಕೇಂದ್ರ ಸರ್ಕಾರದಿಂದ ಬೇಗ ಅನುಮತಿ ಪಡೆದು ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಮುಗಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು.

ಉಪಾಧ್ಯಕ್ಷೆಯರು.—ದಮಯಂತಿ ಬೋರೇಗೌಡರವರೆ, ನಿಮ್ಮ ವಿಷಯದ ಬಗ್ಗೆಯೂ ಮಾನ್ಯ ಮಂತ್ರಿಗಳು ಕಾಲಾವಕಾಶವನ್ನು ಕೇಳಿದ್ದಾರೆ. ಇದನ್ನು ಮುಂದೆ ತೆಗೆದುಕೊಳ್ಳಲಾಗುತ್ತದೆ.

ಶಾಸನ ರಚನಾ ಕಾರ್ಯಕಲಾಪಗಳು

೧೯೯೦ನೇ ಇಸವಿಯ ಕರ್ನಾಟಕ ರಾಜ್ಯದ ನಾಗರೀಕ ಸೇವೆಗಳ (ನಿರಸನ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಕೆ. ಹೆಚ್. ರಂಗನಾಥ್ (ಶಿಕ್ಷಣ ಸಚಿವರು). ಮಾನ್ಯ ಉಪಾಧ್ಯಕ್ಷೆಯರೇ ಮುಖ್ಯಮಂತ್ರಿಗಳ ಪರವಾಗಿ ''೧೯೯೦ ನೇ ಇಸವಿಯ ಕರ್ನಾಟಕ ರಾಜ್ಯದ ನಾಗರೀಕ ಸೇವೆಗಳ (ನಿರಸನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷರು. ಪ್ರಸ್ತಾಪ ಏನೆಂದರೆ ''೧೯೯೦ನೇ ಇಸವಿಯ ಕರ್ನಾಟಕ ರಾಜ್ಯದ ನಾಗರೀಕ ಸೇವೆಗಳ (ನಿರಸನ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''.

ಪ್ರಸ್ತಾವ ಅಂಗೀಕರಿಸಲಾಯಿತು ಮತ್ತು ಅನುಮತಿ-ನೀಡಲಾಯಿತು

ಶ್ರೀ ಕೆ. ಹೆಚ್. ರಂಗನಾಥ್ (ಶಿಕ್ಷಣ ಮಂತ್ರಿಗಳು).—ಮಾನ್ಯ ಉಪಾಧ್ಯಕ್ಷೆಯರೇ, ''೧೯೯೦ರ ಇಸವಿಯ ಕರ್ನಾಟಕ ರಾಜ್ಯದ ನಾಗರೀಕ ಸೇವೆಗಳ (ನಿರಸನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.

* Annexure

೧೯೯೦ನೇ ಇಸವಿಯ ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ವಿಧೇಯಕ ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಕೆ. ಹೆಚ್. ಪಾಟೀಲ್ (ಬಂದಾಯ ಮತ್ತು ಕಾರ್ಮಿಕ ಮಂತ್ರಿಗಳು). ಮಾನ್ಯ ಅಧ್ಯಕ್ಷರೆ "೧೯೯೦ನೇ ಇಸವಿಯ ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ವಿಧೇಯಕವನ್ನು" ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವನ್ನು ಮಂಡಿಸಲಾಯಿತು

ಶ್ರೀ ಪಾಟೀಳ್ ನಾಗರಾಜ್.—ಮಾನ್ಯ ಉಪಾಧ್ಯಕ್ಷೆಯವರೇ ವಿಧೇಯಕಗಳ ಮಂಡನೆ ಕನ್ನಡದಲ್ಲಿಯೇ ಆಗ ಬೇಕೆಂದು ಅನೇಕ ಸಾರಿ ಮನವಿಮಾಡಿಕೊಂಡಿರುತ್ತೇನೆ. ವಿಧೇಯಕಗಳು ಕನ್ನಡದಲ್ಲೀಯೇ ಇರಬೇಕು. ಆದರೂಸಹ ಇವರು ಇಗ್ಲೆಂಡಿನಿಂದ ಬಂದವರಂತೆ ಆಡುತ್ತಿದ್ದಾರೆ. ಈರೀತಿ

Annexure See Page No. 142